ಅ ದಾ ಸಂ 286/2021

**ಪಿಡಬ್ಲ್ಯೂ- 1**

**ದಿನಾಂಕ 23.02.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ ಜಿ ಬಿ ಎಸ್. ವಕೀಲರವರಿಂದಃ</u>**

1. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. **ಪ್ರಮಾಣಪತ್ರದಲ್ಲಿ ತಿಳಿಸಿರುವ ವಿಷಯ ಸತ್ಯವಿರುತ್ತದೆ.** ಅದರಲ್ಲಿರುವ ಸಹಿ ನನ್ನದಾಗಿರುತ್ತದೆ. ಪ್ರಮಾಣ ಪತ್ರದಲ್ಲಿರುವ ಮಾಹಿತಿಯನ್ನು ನಾನು ಸ್ವತಃ ವಕೀಲರಿಗೆ ನೀಡಿರುತ್ತೇನೆ. **ಅದನ್ನು ನನ್ನ ಸಾಕ್ಷ್ಯ ಎಂದು ಪರಿಗಣಿಸಲು ಕೋರುತ್ತೇನೆ.**

2. ಕ್ರಯದ ಕರಾರು ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ಸಾಕ್ಷಿದಾರರಾದ ರಾಮು ಮತ್ತು ನಂದೀಶ ರವರ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ಸಹಿಗಳನ್ನು ನಿಪಿ-1 ಎ ಮತ್ತು ನಿಪಿ-1 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಪತ್ರ ಬರಹಗಾರರಾದ ಜಮದಗ್ನಿ ಬಾಬುರವರ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-1 ಸಿ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ 1 ನೇ ಪ್ರತಿವಾದಿಯ ಹೆಬ್ಬೆಟ್ಟು ಗುರುತನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿಪಿ-1 ರಲ್ಲಿರುವ 2 ಮತ್ತು 3 ನೇ ಪ್ರತಿವಾದಿಯರ ಸಹಿಗಳನ್ನು ನೋಡಿ ಗುರುತಿಸಿದ್ದು, ಸದರಿ ಸಹಿಗಳನ್ನು ನಿಪಿ-1 ಡಿ ಮತ್ತು ನಿಪಿ-1 ಇ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-1 ಎಫ್ ಎಂದು ಗುರುತಿಸಲಾಯಿತು.

3. ಉಚಿತ ಹಕ್ಕು ನಿವೇಶನ ಹಕ್ಕುಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ವಕೀಲರ ಮೂಲಕ ಪ್ರತಿವಾದಿಗಳಿಗೆ ನೀಡಿರುವ ನೋಟಿಸನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. 3 ಅಂಚೆ ರಶೀದಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಗಳನ್ನು ಕ್ರಮವಾಗಿ ನಿಪಿ-4 ರಿಂದ ನಿಪಿ-6 ಎಂದು ಗುರುತಿಸಲಾಯಿತು. 3 ಅಂಚೆ ಸ್ವೀಕೃತಿ ಪತ್ರಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಗಳನ್ನು ಕ್ರಮವಾಗಿ ನಿಪಿ-7 ರಿಂದ ನಿಪಿ-9 ಎಂದು ಗುರುತಿಸಲಾಯಿತು.

ಅ ದಾ ಸಂ 286/2021

ದಾವಾ ಪತ್ರದಲ್ಲಿ ಕೋರಿರುವಂತೆ ದಾವೆಯನ್ನು ಪುರಸ್ಕರಿಸಬೇಕಾಗಿ ನ್ಯಾಯಾಲಯದಲ್ಲಿ ಪ್ರಾರ್ಥಿಸಿಕೊಳ್ಳುತ್ತೇನೆ.

ಪಾಟಿ ಸವಾಲಿಗೆ ಸಮಯಾವಕಾಶ ನೀಡಲಾಗಿದೆ

(ನನ್ನ ಉಕ್ತಲೇಖ ವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

**ಸಾ.ಓ.ಹೇ.ಸ.ಇದೆ.**

ಸಿ/ಸಿ **2 ನೇ ಅಪರ ಸಿವಿಲ್ ಜಡ್ಜ್ ಮತ್ತು**
**ಜೆಎಂಎಫ್‌ಸಿ, ಪಾಂಡವಪುರ.**